**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2016ರ ಪರಿಷ್ಕೃತ ಎನ್ ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪರಿಷ್ಕರಿಸುವ ಕುರಿತು.

**ಓದಲಾಗಿದೆ:**
1. ಸರ್ಕಾರಿ ಆದೇಶ ಸಂಖ್ಯೆ: LAW-LCE/214/2022 ದಿನಾಂಕ: 29.10.2022.
2. ಸರ್ಕಾರಿ ಆದೇಶ ಸಂಖ್ಯೆ: ಆಇ 44 ಎಸ್‌ಆರ್‌ಪಿ 2022 ದಿನಾಂಕ: 22.11.2022
3. ಸರ್ಕಾರಿ ಆದೇಶ ಸಂಖ್ಯೆ: ಆಇ 11 ಎಸ್‌ಆರ್‌ಪಿ 2023 ದಿನಾಂಕ: 01.06.2023
4. ಸರ್ಕಾರಿ ಆದೇಶ ಸಂಖ್ಯೆ: ಆಇ 11 ಎಸ್‌ಆರ್‌ಪಿ 2023(ಭಾ) ದಿನಾಂಕ: 02.06.2023
5. ಸರ್ಕಾರಿ ಆದೇಶ ಸಂಖ್ಯೆ: LAW-LCE/214/2022(ಭಾ-5) ದಿನಾಂಕ: 24.08.2023.
6. ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2023 ದಿನಾಂಕ:27.10.2023
7. ಸರ್ಕಾರಿ ಆದೇಶ ಸಂಖ್ಯೆ: ಆಇ 20 ಎಸ್‌ಆರ್‌ಪಿ 2024 ದಿನಾಂಕ:15.03.2024
8. ಭಾರತ ಸರ್ಕಾರದ ದಿನಾಂಕ: 21.10.2024ರ ಅಧಿಕೃತ ಜ್ಞಾಪನ ಸಂಖ್ಯೆ:1/5/2024-E-II(B).

**ಸರ್ಕಾರಿ ಆದೇಶ ಸಂಖ್ಯೆ: ಆಇ 46 ಎಸ್‌ಆರ್‌ಪಿ 2024**

**ಬೆಂಗಳೂರು, ದಿನಾಂಕ: 28ನೇ ನವೆಂಬರ್ 2024**

2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿನ ನ್ಯಾಯಾಂಗ ಅಧಿಕಾರಿಗಳ ತುಟ್ಟಿಭತ್ಯೆಯ ದರಗಳನ್ನು ಪ್ರಸ್ತುತ ಮೂಲ ವೇತನದ **50% ರಿಂದ 53% ಗೆ 1ನೇ ಜುಲೈ 2024** ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

2. ನಿವೃತ್ತ ನ್ಯಾಯಾಂಗ ಅಧಿಕಾರಿಗಳು / ಕುಟುಂಬ ನಿವೃತ್ತಿ ವೇತನದಾರರುಗಳ ತುಟ್ಟಿ ಭತ್ಯೆಯ ದರಗಳನ್ನು ಸಹ ಮೂಲ ಪಿಂಚಣಿ/ಕುಟುಂಬ ಪಿಂಚಣಿಯ **50% ರಿಂದ 53% ಗೆ 1ನೇ ಜುಲೈ 2024** ರಿಂದ ಜಾರಿಗೆ ಬರುವಂತೆ ಪರಿಷ್ಕರಿಸಲು ಸರ್ಕಾರವು ಹರ್ಷಿಸುತ್ತದೆ.

3. ಈ ಆದೇಶದ ಉದ್ದೇಶಗಳಿಗಾಗಿ 'ಮೂಲ ವೇತನ' ಮತ್ತು ಮೂಲ ಪಿಂಚಣಿ/ಕುಟುಂಬ ಪಿಂಚಣಿ ಎಂದರೆ ಸಂದರ್ಭಾನುಸಾರ, ನ್ಯಾಯಾಂಗ ಅಧಿಕಾರಿಯು ಧಾರಣೆ ಮಾಡಿರುವ ಹುದ್ದೆಗೆ ಅನ್ವಯವಾಗುವ 2016ರ ಪರಿಷ್ಕೃತ ಎನ್‌ಜೆಪಿಸಿ ವೇತನ ಶ್ರೇಣಿಗಳಲ್ಲಿ ಪಡೆಯುವ ಮೂಲ ವೇತನ ಮತ್ತು ಪರಿಷ್ಕೃತ ಮೂಲ ಪಿಂಚಣಿ/ಕುಟುಂಬ ಪಿಂಚಣಿ.

4. ಸಂದರ್ಭಾನುಸಾರ ಮೂಲ ವೇತನ ಅಥವಾ ಮೂಲ ಪಿಂಚಣಿ ಎಂದು ಪರಿಗಣಿಸಲ್ಪಡದ ಯಾವುದೇ ಉಪಲಬ್ಧಗಳನ್ನು ವೇತನ ಅಥವಾ ಪಿಂಚಣಿಗೆ ಸೇರಿಸತಕ್ಕದ್ದಲ್ಲ.

5. ಈ ಆದೇಶದನ್ವಯ ಲಭ್ಯವಾಗುವ ತುಟ್ಟಿಭತ್ಯೆಯನ್ನು ಮುಂದಿನ ಆದೇಶದವರೆಗೆ ನಗದಾಗಿ ಪಾವತಿ ಮಾಡುವುದು.

6. ಡಿಸೆಂಬರ್ 2024ರ ವೇತನ / ಪಿಂಚಣಿಯ ಬಟವಾಡೆಗೂ ಮೊದಲು ತುಟ್ಟಿಭತ್ಯೆಯ ಬಾಕಿ ಮೊತ್ತವನ್ನು ಪಾವತಿಸತಕ್ಕದ್ದಲ್ಲ.

7. ತುಟ್ಟಿಭತ್ಯೆಯ ಕಾರಣದಿಂದ ಸಂದಾಯ ಮಾಡಬೇಕಾಗಿರುವ ಐವತ್ತು ಪೈಸೆ ಹಾಗೂ ಅದಕ್ಕಿಂತ ಹೆಚ್ಚಿನ ಭಿನ್ನಾಂಕಗಳನ್ನು ಮುಂದಿನ ರೂಪಾಯಿಗೆ ಪೂರ್ಣಗೊಳಿಸತಕ್ಕದ್ದು ಮತ್ತು ಐವತ್ತು ಪೈಸೆಗಿಂತ ಕಡಿಮೆ ಇರುವ ಭಿನ್ನಾಂಕಗಳನ್ನು ಕಡೆಗಣಿಸತಕ್ಕದ್ದು.

8. ತುಟ್ಟಿಭತ್ಯೆಯನ್ನು ಸಂಭಾವನೆಯ ವಿಶಿಷ್ಟ ಅಂಶವಾಗಿ ತೋರಿಸುವುದು ಮತ್ತು ಯಾವುದೇ ಉದ್ದೇಶಕ್ಕಾಗಿ ಇದನ್ನು ವೇತನ ಎಂದು ಪರಿಗಣಿಸಲಾಗುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಉಮಾ.ಕೆ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಸೇವೆಗಳು-2).

28/11/2024

ಸಂಕಲನಕಾರರು, ಕರ್ನಾಟಕ ಗೆಜೆಟ್, ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸುವುದಕ್ಕಾಗಿ ಹಾಗೂ 50 ಪ್ರತಿಗಳನ್ನು ಆರ್ಥಿಕ ಇಲಾಖೆಗೆ ಸರಬರಾಜು ಮಾಡಲು.

ಇವರಿಗೆ:

1. ಸರ್ಕಾರದ ಮುಖ್ಯ ಕಾರ್ಯದರ್ಶಿ / ಅಪರ ಮುಖ್ಯ ಕಾರ್ಯದರ್ಶಿಗಳು.
2. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಹೊಸಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398), ಬೆಂಗಳೂರು.

3. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ. ನಂ.5398), ಬೆಂಗಳೂರು.
4. ಪ್ರಧಾನ ಮಹಾಲೇಖಪಾಲರು (ಲೆಕ್ಕಗಳು ಮತ್ತು ಹಕ್ಕುಗಳು), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329), ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6. ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
7. ರಿಜಿಸ್ಟ್ರಾರ್, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು
8. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ ಬೆಂಗಳೂರು.
9. ಕಾರ್ಯದರ್ಶಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ವಿಧಾನಸೌಧ, ಬೆಂಗಳೂರು.
10. ಎಲ್ಲಾ ಜಿಲ್ಲೆಗಳ ಜಿಲ್ಲಾ ಮತ್ತು ಸತ್ರನ್ಯಾಯಾಧೀಶರು.
11. ಖಜಾನೆ ಅಧಿಕಾರಿ, ರಾಜ್ಯ ಹುಜೂರು ಖಜಾನೆ / ಜಿಲ್ಲಾ ಖಜಾನೆಗಳು.
12. ನಿರ್ದೇಶಕರು, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಕಾಸಸೌಧ, ಬೆಂಗಳೂರು.
13. ಯೋಜನಾ ನಿರ್ದೇಶಕರು, ಹೆಚ್‌ಆರ್‌ಎಂಎಸ್ 2.0, ಆರ್ಥಿಕ ಇಲಾಖೆ, 5ನೇ ಮಹಡಿ, ನ್ಯೂ ಕೆ.ಪಿ.ಸಿ.ಎಲ್.ಗ್ರೀನ್ ಬಿಲ್ಡಿಂಗ್ (ಸಿ.ಐ.ಡಿ. ಕಛೇರಿ ಹತ್ತಿರ), ಅರಮನೆ ರಸ್ತೆ, ಬೆಂಗಳೂರು-560001.
14. ಕರ್ನಾಟಕ ಸರ್ಕಾರ ಸಚಿವಾಲಯದ ಗ್ರಂಥಾಲಯ/ವಿಧಾನಮಂಡಲದ ಗ್ರಂಥಾಲಯ.
15. ವಾರಪತ್ರ/ಶಾಖೆಯ ರಕ್ಷಾಕಡತ.

**ಕರ್ನಾಟಕ ಸರ್ಕಾರದ ಆರ್ಥಿಕ ಇಲಾಖೆಯ ಅಧಿಕೃತ ಅಂತರ್ಜಾಲತಾಣ www.finance.karnataka.gov.in ವೀಕ್ಷಿಸಿ.**